ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 36 ಜಿಪಸ 2018

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:27-07-2018.

ಇವರಿಂದ:

**ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

1. **ಕಾರ್ಯದರ್ಶಿ**
   ರಾಜ್ಯ ಚುನಾವಣಾ ಆಯೋಗ,
   ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ,
   ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ-8,
   ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.

2. ಪ್ರಾದೇಶಿಕ ಆಯುಕ್ತರು,
   ಬೆಳಗಾವಿ ವಿಭಾಗ,
   ಬೆಳಗಾವಿ.

3. **ಜಿಲ್ಲಾಧಿಕಾರಿ,**
   ಬೆಳಗಾವಿ ಜಿಲ್ಲೆ.

4. **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,**
   ಜಿಲ್ಲಾ ಪಂಚಾಯತ್,
   ಬೆಳಗಾವಿ ಜಿಲ್ಲೆ.

ಮಾನ್ಯರೆ,

**ವಿಷಯ:** ಕಿತ್ತೂರು ತಾಲ್ಲೂಕು ಪಂಚಾಯಿತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಧಿಸೂಚನೆಯ ಪ್ರತಿಗಳನ್ನು ಕಳುಹಿಸುವ ಕುರಿತು.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಿತ್ತೂರು ತಾಲ್ಲೂಕು ಪಂಚಾಯಿತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳಿಗೆ ಮೀಸಲಾತಿಯನ್ನು ನಿಗಧಿಗೊಳಿಸಿ, ಅಧಿಸೂಚನೆಯನ್ನು ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿದ್ದು, ಸದರಿ ಪ್ರತಿಗಳನ್ನು ಮುಂದಿನ ಅಗತ್ಯ ಕ್ರಮಕ್ಕಾಗಿ ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ ಹಾಗೂ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಿದೆ
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಮಾಹಿತಿಗಾಗಿ.
3. ನಿರ್ದೇಶಕರು(ಪಂ.ರಾಜ್-2), ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
4. ವ್ಯವಸ್ಥಾಪಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಸದರಿ ಅಧಿಸೂಚನೆಯ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಹಾಕಲು ಕ್ರಮ ವಹಿಸುವಂತೆ ಸೂಚಿಸಿದೆ.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| ಭಾಗ–III | ಬೆಂಗಳೂರು, ಶುಕ್ರವಾರ, ಜುಲೈ ೨೦, ೨೦೧೮ (ಆಷಾಢ ೨೯, ಶಕ ವರ್ಷ ೧೯೪೦) | ನಂ. ೯೭೩ |
|---|---|---|
| Part–III | Bengaluru, Friday, July 20, 2018 (Aashada 29, Shaka Varsha 1940) | No. 973 |



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಗ್ರಾಅಪ 36 ಜಿಪಸ 2017, ಬೆಂಗಳೂರು,ದಿನಾಂಕ:18-07-2018**

ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ) ತಿದ್ದುಪಡಿ ನಿಯಮಗಳು, 2016 ರಲ್ಲಿ ನಿಗಧಿಪಡಿಸಿದಂತೆ ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿಗಳನ್ನು ನಿಗಧಿ ಪಡಿಸಿ, ದಿನಾಂಕ: 21-04-2016 ರಂದು ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಆದರೆ, ದಿನಾಂಕ: 07-02-2018 ರಿಂದ ಜಾರಿಗೆ ಬರುವಂತೆ ಹೊಸ ಕಿತ್ತೂರು ತಾಲ್ಲೂಕು ಪಂಚಾಯಿತಿಯನ್ನು ರಚಿಸಲಾಗಿರುತ್ತದೆ. ಚುನಾವಣೆ ನಡೆದ ನಂತರ ರಚಿತವಾಗಿರುವ ಹೊಸ ತಾಲ್ಲೂಕು ಪಂಚಾಯಿತಿಗಳಿಗೆ ಮತ್ತೊಮ್ಮೆ ಒಟ್ಟಾರೆಯಾಗಿ ಆವರ್ತನೆಯ ಮೇಲೆ ಮೀಸಲಾತಿಯನ್ನು ನಿಗಧಿಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಆದುದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 321 ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ಕಿತ್ತೂರು ತಾಲ್ಲೂಕು ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಎಲ್ಲಾ ಜಾತಿ ಮತ್ತು ಪ್ರವರ್ಗದ ಅಭ್ಯರ್ಥಿಗಳು ಸ್ಪರ್ಧಿಸಲು ಅವಕಾಶವನ್ನು ಕಲ್ಪಿಸಲು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 138 (2) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಪ್ರಕರಣ 302 (ಇ) ರನ್ವಯ ಫೆಬ್ರವರಿ 2018 ರಲ್ಲಿ ರಚಿತವಾದ ಕಿತ್ತೂರು ತಾಲ್ಲೂಕು ಪಂಚಾಯಿತಿಯ **ಉಳಿದ ಅವಧಿಗೆ** ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಮೀಸಲಾತಿಯನ್ನು ನಿಗಧಿಗೊಳಿಸಬೇಕಾಗಿರುತ್ತದೆ. ಅದರಂತೆ, ಕಿತ್ತೂರು ತಾಲ್ಲೂಕು ಪಂಚಾಯಿತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಈ ಕೆಳಗಿನಂತೆ ಮೀಸಲಾತಿಯನ್ನು ನಿಗಧಿಪಡಿಸಲಾಗಿದೆ.

| ಕ್ರ.ಸಂ. | ತಾಲ್ಲೂಕು ಪಂಚಾಯಿತಿಯ ಹೆಸರು | ಅಧ್ಯಕ್ಷ ಸ್ಥಾನದ ಮೀಸಲಾತಿ | ಉಪಾಧ್ಯಕ್ಷ ಸ್ಥಾನದ ಮೀಸಲಾತಿ |
|---|---|---|---|
| 1 | 2 | 3 | 4 |
| 1 | ಕಿತ್ತೂರು ತಾಲ್ಲೂಕು ಪಂಚಾಯಿತಿ | ಸಾಮಾನ್ಯ | ಸಾಮಾನ್ಯ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ವಿ.ವೆಂಕಟೇಶ್
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 1000